ದಿನಾಂಕಃ 29.10.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ** ಅರ್ಜಿದಾರರ ಪರ ಶ್ರೀ.ಪಿ.ಬಿ.ಜಿ ಪರ ಶ್ರೀಮತಿ. ಹೆಚ್.ಐ.ಎಮ್. ವಕೀಲರಿಂದ

ನಾನು ಈ ಕೇಸಿನ ಅರ್ಜಿದಾರನಾಗಿರುತ್ತೇನೆ. ನಾನು ನನ್ನ ಪ್ರಮಾಣ ಪತ್ರವನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದನ್ನು ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಲಾಗಿದೆ. ಅದರಲ್ಲಿರುವ ವಿಷಯಗಳೆಲ್ಲ ಸತ್ಯವಾಗಿರುತ್ತದೆ ಹಾಗೂ ಅದರಲ್ಲಿರುವ ಸಹಿ ನನ್ನದಾಗಿರುತ್ತದೆ. ಅದನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಕೇಳಿಕೊಳ್ಳುತ್ತೇನೆ.

1. ಎದುರುದಾರರು ನನಗೆ ನೀಡಿದ ಅಲಭ್ಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.
2. ವಂಶವೃಕ್ಷ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-2 ಎಂದು ಗುರುತಿಸಲಾಯಿತು.
3. ಅರ್ಜಿದಾರರ 4 ಆಧಾರ್ ಕಾರ್ಡಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-3 ರಿಂದ 6 ಎಂದು ಗುರುತಿಸಲಾಯಿತು.
4. ಅರ್ಜಿದಾರರು ಹಾಜರುಪಡಿಸಿದ ದಿನಪತ್ರಿಕೆಗಳನ್ನು ಅವುಗಳನ್ನು ನಿಪಿ-7 ಮತ್ತು 8 ಎಂದು, ಪ್ರಕಟಣೆಯ ಭಾಗವನ್ನು ನಿಪಿ-7(ಎ) ಮತ್ತು 8(ಎ) ಎಂದು ಗುರುತಿಸಲಾಯಿತು.

(ಎದುರುದಾರರು ಏಕಪಕ್ಷೀಯವಾಗಿರುವುದರಿಂದ ಪಾಟಿ ಸವಾಲು ಇಲ್ಲವೆಂದು ಪರಿಗಣಿಸಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

Sd/-

ಓ ಹೇ ಕೇ ಸರಿ ಇದೆ.

ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,ಸಂಚಾರಿ
ನ್ಯಾಯಪೀಠ ರಟ್ಟೀಹಳ್ಳಿ.